ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಬೀದರ್ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗೊಳಿಸುವ ಕುರಿತು

ಶ್ರೀ ಅರವಿಂದ ಕುಮಾರ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು):-

826 (925) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಸ್ವದೇಶ ದರ್ಶನ್ ಯೋಜನೆಯಡಿಯಲ್ಲಿ 2016ರಲ್ಲಿ ಟೂರೀಸಮ್ ಸರ್ಕ್ಯೂಟ್ ಬೀದರ್, ಬಸವಕಲ್ಯಾಣ, ಕಲಬುರಗಿ, ಬಿಜಾಪುರ, ಬಾದಾಮಿ, ಐಹೊಳೆ, ಪಟ್ಟದಕಲ್ಲು ಇವುಗಳ ಮಧ್ಯೆ ರಾಯಲ್ ಡೆಕ್ಕನ್ ಟೂರೀಸಮ್ ಸರ್ಕ್ಯೂಟ್ ಅಭಿವೃದ್ಧಿಗೋಸ್ಕರ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಸದರಿ ಪ್ರಸ್ತಾವನೆ ಈಗ ಯಾವ ಹಂತದಲ್ಲಿದೆ ;

(ಆ) ಇದನ್ನು ಜಾರಿ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?